ಶ್ರೀ ಎನ್. ಹುಚ್ಚಮಾಸ್ತಿಗೌಡ
(ಕೃಷಿ ಸಚಿವರು)

ಬಂದಿದೆ.

ಚಾಲ್ತಿ ಸಾಲಿನಲ್ಲಿ ಪೊಟ್ಯಾಷ್, ಫಾಸ್ಫೇಟ್ ಮತ್ತು ಕಾಂಪ್ಲೆಕ್ಸ್ ರಸಗೊಬ್ಬರಗಳನ್ನು ಅನಿಯಂತ್ರಣಗೊಳಿಸಿದ ಮೇಲೆ ಸೆಪ್ಟಂಬರ್ ನಿಂದ ಡಿಸೆಂಬರ್ ತಿಂಗಳವರೆಗೆ ಪೊಟ್ಯಾಷ್ ಮತ್ತು ಫಾಸ್ಫೇಟ್ ರಸಗೊಬ್ಬರಗಳ ಬಳಕೆ ಕಳೆದ ಸಾಲಿನ ಇದೇ ಅವಧಿಗೆ ಹೋಲಿಸಿದರೆ ಕ್ರಮವಾಗಿ ಸುಮಾರು ಶೇಕಡ ೬೦ ಮತ್ತು ಶೇಕಡ ೫೦ರಷ್ಟು ಕಡಿಮೆ ಆಗಿರುತ್ತದೆ.

ಹೌದು.

ಪೊಟ್ಯಾಷ್, ಫಾಸ್ಫೇಟ್ ಮತ್ತು ಕಾಂಪ್ಲೆಕ್ಸ್ ರಸಗೊಬ್ಬರಗಳನ್ನು ರಿಯಾಯಿತಿ ದರದಲ್ಲಿ ರೈತರಿಗೆ ಸರಬರಾಜು ಮಾಡುವ ಯೋಜನೆಯನ್ನು ಜಾರಿಗೊಳಿಸಲಾಗಿದೆ.

ಅಧ್ಯಕ್ಷರು:- ಚುಕ್ಕೆ ಗುರುತಿಲ್ಲದ ಪ್ರಶ್ನೋತ್ತರಗಳನ್ನು ಸಭೆಯ ಮುಂದೆ ಮಂಡಿಸಲಾಯಿತು.

## ಕಾರ್ಯದರ್ಶಿಯವರ ವರದಿ

ಕಾರ್ಯದರ್ಶಿಯವರು:- ಮಾನ್ಯ ಅಧ್ಯಕ್ಷರೆ, ಕಳೆದ ಅಧಿವೇಶನದಲ್ಲಿ ಒಪ್ಪಿಸಿದ ವರದಿಯ ನಂತರ ರಾಜ್ಯಪಾಲರಿಂದ ಅಥವಾ ರಾಷ್ಟ್ರಾಧ್ಯಕ್ಷರಿಂದ ಸಂದರ್ಭಾನುಸಾರವಾಗಿ ಒಪ್ಪಿಗೆಯನ್ನು ಪಡೆದಿರತಕ್ಕ ವಿಧೇಯಕಗಳ ಪಟ್ಟಿಯನ್ನು ಸಭೆಯ ಮುಂದೆ ಮಂಡಿಸುತ್ತಿದ್ದೇನೆ.

ರಾಜ್ಯಪಾಲರಿಂದ ಅಥವಾ ರಾಷ್ಟ್ರಪತಿಯವರಿಂದ ಒಪ್ಪಿಗೆಯನ್ನು ಪಡೆದಿರತಕ್ಕ ವಿಧೇಯಕಗಳ ಪಟ್ಟಿ.

| ಕ್ರಮ ಸಂಖ್ಯೆ | ವಿಧೇಯಕದ ಹೆಸರು | ಒಪ್ಪಿಗೆಯನ್ನು ಪಡೆದ ದಿನಾಂಕ | ಒಪ್ಪಿಗೆಯನ್ನು ನೀಡಿದವರು |
|---|---|---|---|
| ೧. | ಕರ್ನಾಟಕ ನ್ಯಾಯಾಲಯ ಫೀಜುಗಳ ಮತ್ತು ದಾವೆಗಳ ಮೌಲ್ಯ ನಿಗದಿ (ತಿದ್ದುಪಡಿ) ವಿಧೇಯಕ, ೧೯೯೨ | ೨೮-೧೧-೧೯೯೩ | ರಾಜ್ಯಪಾಲರು |
| ೨. | ಭಾರತದ ರಾಷ್ಟ್ರೀಯ ಕಾನೂನು ವಿದ್ಯಾಲಯ (ತಿದ್ದುಪಡಿ) ವಿಧೇಯಕ ೧೯೯೨. | ೧-೨-೧೯೯೩ | ರಾಜ್ಯಪಾಲರು |

ಅಧ್ಯಕ್ಷರು:- ಸಭೆಯ ಮುಂದೆ ಮಂಡಿಸಲಾಯಿತು.

## ವರದಿಯನ್ನೊಪ್ಪಿಸುವುದು

ಶ್ರೀ ಡಿ. ಹುಲಗೆಗೌಡ (ಅಧ್ಯಕ್ಷರು, ಸಾರ್ವಜನಿಕ ಉದ್ಯಮಗಳ ಸಮಿತಿ):- ಮಾನ್ಯ ಅಧ್ಯಕ್ಷರೆ, ಸಾರ್ವಜನಿಕ ಉದ್ಯಮಗಳ ಸಮಿತಿಯ ೫೬ನೇ ವರದಿಯನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು:- ಸಭೆಯ ಮುಂದೆ ಮಂಡಿಸಲಾಯಿತು.